**Bangalore**
**Regional News**
**12.06.2026 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಮೇಕೆದಾಟು, ಕೃಷ್ಣಾ ಮೇಲ್ದಂಡೆ, ಭದ್ರಾ ಮೇಲ್ದಂಡೆ, ಮಹದಾಯಿ ಯೋಜನೆಗಳಿಗೆ ಅನುಮತಿ, ಅನುದಾನ ಕೋರಿ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮನವಿ

೨. ಹೆಚ್‌ಎಂಟಿ ಕಂಪನಿಗೆ ಪುನರುಜ್ಜೀವನ ; ಯೋಜನೆ ಅಂತಿಮ ಹಂತದಲ್ಲಿ - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ

೩. ಗ್ರಾಮೀಣ ಪ್ರದೇಶದ ೫೦ ಸರ್ಕಾರಿ ಶಾಲೆಗಳಲ್ಲಿ ಕೃತಕಬುದ್ಧಿಮತ್ತೆ ಪ್ರಯೋಗಾಲಯ ಸ್ಥಾಪಿಸಲು ಅನುಮೋದನೆ - ಸಚಿವ ಪ್ರಿಯಾಂಕ್ ಖರ್ಗೆ

೪. ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಕೊಲ್ಲೂರಿಗೆ ಭೇಟಿ ; ಶ್ರೀ ಮೂಕಾಂಬಿಕಾ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಕೆ

**<><*<><>*><>**

ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳಾದ ಮೇಕೆದಾಟು, ಕೃಷ್ಣಾ ಮೇಲ್ದಂಡೆ, ಭದ್ರಾ ಮೇಲ್ದಂಡೆ, ಮಹದಾಯಿ ಯೋಜನೆಗಳಿಗೆ ಅನುಮತಿ, ಅನುದಾನ ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಜಲಶಕ್ತಿ ಸಚಿವರಿಗೆ ಮನವಿ ಮಾಡಿದ್ದಾರೆ. ಅವರು ದೆಹಲಿಯಲ್ಲಿಂದು ಕೇಂದ್ರ ಜಲಶಕ್ತಿ ಖಾತೆ ಸಚಿವ ಸಿ.ಆರ್.ಪಾಟೀಲ್ ಅವರನ್ನು ಭೇಟಿ ಮಾಡಿ ಈ ಕುರಿತು ವಿವರವಾದ ಮನವಿಯನ್ನು ಸಲ್ಲಿಸಿದರು. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮೇಕೆದಾಟು ಯೋಜನೆಯನ್ನು ಮೌಲ್ಯಮಾಪನ ಮಾಡುವಂತೆ ಕೇಂದ್ರ ಜಲ ಆಯೋಗವನ್ನು ಕೇಳಿದೆ ಎಂದು ಪ್ರಸ್ತಾಪಿಸಿರುವ ಮುಖ್ಯಮಂತ್ರಿಯವರು, ಈ ಬಗ್ಗೆ ತ್ವರಿತ ಅನುಮತಿ ನೀಡಬೇಕು ಎಂದು ಕೇಂದ್ರ ಸರ್ಕಾರವನ್ನು ವಿನಂತಿಸಿದ್ದಾರೆ. ಕೃಷ್ಣಾ ನೀರಿನ ಹಂಚಿಕೆಗೆ ಸಂಬಂಧಿಸಿದಂತೆ ಕೃಷ್ಣಾ ಜಲ ವಿವಾದ ನ್ಯಾಯಮಂಡಳಿಯ ತೀರ್ಪನ್ನು ಗೆಜೆಟ್‌ನಲ್ಲಿ ಪ್ರಕಟಿಸಬೇಕು. ರಾಜ್ಯ ಸರ್ಕಾರ ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಅನುಷ್ಠಾನಕ್ಕಾಗಿ ಭಾರೀ ಮೊತ್ತವನ್ನು ಹೂಡಿಕೆ ಮಾಡಿದೆ. ಈ ಯೋಜನೆಗಳನ್ನು ಮುಂದುವರೆಸಲು ಹಾಗೂ ರಾಜ್ಯದ ನೀರಿನ ಪಾಲನ್ನು

ಬಳಸಿಕೊಳ್ಳಲು ಕೇಂದ್ರದ ಬೆಂಬಲದ ಅಗತ್ಯವಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರ ೨೦೨೩-೨೪ರ ಬಜೆಟ್‌ನಲ್ಲಿ ಘೋಷಿಸಿದಂತೆ ೫ ಸಾವಿರದ ೩೦೦ ಕೋಟಿ ರೂಪಾಯಿ ಸಹಾಯವನ್ನು ಬಿಡುಗಡೆ ಮಾಡಬೇಕು. ಕಳೆದ ಮಾರ್ಚ್ ತಿಂಗಳಲ್ಲಿ ನಡೆದ ಜಲಶಕ್ತಿ ಸಚಿವಾಲಯದ ೧೬೦ನೇ ಸಲಹಾ ಸಮಿತಿ ಸಭೆಯಲ್ಲಿ ಮೇಲ್ದಂಡೆ ಯೋಜನೆಯ ಪರಿಷ್ಕೃತ ವೆಚ್ಚವನ್ನು ೨೧ ಸಾವಿರದ ೧೬೭ ಕೋಟಿ ೯೩ ಲಕ್ಷ ರೂಪಾಯಿಗೆ ಮೌಲ್ಯಮಾಪನ ಮಾಡಲಾಗಿದೆ. ಈ ಯೋಜನೆಯಿಂದ ಲಕ್ಷಾಂತರ ರೈತರಿಗೆ ಅನುಕೂಲವಾಗಲಿದ್ದು, ಟಿಎಂಕೆಎಸ್‌ವೈ-ಎಐಬಿಪಿ ಯೋಜನೆಯಡಿ ಈ ಕಾಮಗಾರಿಗೆ ಕೇಂದ್ರೀಯ ನೆರವು ಒದಗಿಸಬೇಕು ಎಂದು ಮನವಿಯಲ್ಲಿ ಕೋರಲಾಗಿದೆ. ಹುಬ್ಬಳ್ಳಿ-ಧಾರವಾಡ ನಗರಗಳ ಕುಡಿಯುವ ನೀರು ಬೇಡಿಕೆ ಪೂರೈಸುವ ಕಳಸಾ-ಬಂಡೂರಿ ನಾಲಾ ಯೋಜನೆಗೆ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಿಂದ ಅನುಮೋದನೆ ಒದಗಿಸಬೇಕು. ಇದಲ್ಲದೇ ರಾಜ್ಯದ ೬ ಯೋಜನೆಗಳಿಗೆ ಕೇಂದ್ರೀಯ ನೆರವು ಕೋರಿ ವಿವರ ಯೋಜನಾ ವರದಿಗಳನ್ನು ಸಲ್ಲಿಸಲಾಗಿದ್ದು, ಹಣಕಾಸು ಒದಗಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೋರಿದ್ದಾರೆ. ನದಿ ಜೋಡಣೆ ಯೋಜನೆಯಲ್ಲಿ ರಾಜ್ಯಕ್ಕೆ ನ್ಯಾಯಯುತ ಪಾಲು ಹಂಚಿಕೆಯಾಗಬೇಕು ಎಂದು ಮನವಿಯಲ್ಲಿ ವಿನಂತಿಸಲಾಗಿದೆ. ನಂತರ ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ತುಂಗಭದ್ರಾ ಅಣೆಕಟ್ಟಿನ ನೂತನ ಗೇಟ್‌ಗಳ ಉದ್ಘಾಟನೆಗೆ ಕೇಂದ್ರ ಜಲಶಕ್ತಿ ಸಚಿವರು ಆಗಮಿಸುತ್ತಿದ್ದು, ನೆರೆ ರಾಜ್ಯಗಳ ಮುಖ್ಯಮಂತ್ರಿಗಳು ಕೂಡ ಭಾಗವಹಿಸುವ ಸಾಧ್ಯತೆ ಇದೆ ಎಂದು ಹೇಳಿದರು. ಪ್ರಧಾನಮಂತ್ರಿಗಳಿಗೆ ನೀಡಿರುವ ಮನವಿ ಬಗ್ಗೆ ಕೇಳಿದಾಗ, ಕರ್ನಾಟಕ ರಾಜ್ಯದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಕೃಷಿ, ನೀರಾವರಿ, ನಗರಾಭಿವೃದ್ಧಿ, ಸಂಚಾರ ವಿಚಾರಗಳಿಗೆ ಸಂಬಂಧಿಸಿದಂತೆ ಮನವಿ ಮಾಡಲಾಗಿದೆ. ಅವರು ಪರಿಶೀಲಿಸಿ ತೀರ್ಮಾನ ಮಾಡಲಿದ್ದಾರೆ ಎಂದು ತಿಳಿಸಿದರು.

<><*<><>*><>

ದೇಶದ ಪ್ರತಿಷ್ಠಿತ ಉದ್ಯಮಗಳಲ್ಲಿ ಒಂದಾದ ಹಿಂದುಸ್ತಾನ್ ಮಷೀನ್ ಟೂಲ್ಸ್ -ಹೆಚ್‌ಎಂಟಿ ಕಂಪನಿಗೆ ಮರುಜೀವ ನೀಡುವ ಯೋಜನೆ ಅಂತಿಮ ಹಂತದಲ್ಲಿ ಇದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಅವರು, ಬೆಂಗಳೂರಿನ ಕೇಂದ್ರೀಯ ಕೈಗಾರಿಕಾ ಉತ್ಪಾದನಾ ಸಂಸ್ಥೆಯ ೬೫ನೇ ಸಂಸ್ಥಾಪನಾ ದಿನದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಬೆಂಗಳೂರು ಸೇರಿದಂತೆ ದೇಶದ ವಿವಿಧ ಭಾಗಗಳಲ್ಲಿ ಇರುವ ಹೆಚ್.ಎಂ.ಟಿ. ಯ ಎಲ್ಲಾ ವಿಭಾಗಗಳನ್ನು ಪುನರುಜ್ಜೀವನಗೊಳಿಸುವ ಉದ್ದೇಶವಿದೆ. ವಿವರ

ಯೋಜನಾ ವರದಿ ಕೂಡ ಅಂತಿಮ ಹಂತದಲ್ಲಿದೆ. ಶೀಘ್ರದಲ್ಲೇ ವಿತ್ತ ಸಚಿವರನ್ನು ಭೇಟಿಯಾಗಿ ಚರ್ಚೆ ನಡೆಸಲಾಗುವುದು ಎಂದು ಸಚಿವ ಕುಮಾರಸ್ವಾಮಿ ಹೇಳಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಕಳೆದ ೧೨ ವರ್ಷಗಳಲ್ಲಿ ಕೈಗಾರಿಕಾ ಸಂಶೋಧನೆಗೆ ಒತ್ತು ನೀಡಿದೆ. ಕೇಂದ್ರೀಯ ಕೈಗಾರಿಕಾ ಉತ್ಪಾದನಾ ಸಂಸ್ಥೆ-ಸಿಎಂಟಿಐ ಬಾಹ್ಯಾಕಾಶ, ರಕ್ಷಣೆ ಸೇರಿದಂತೆ ಹಲವಾರು ಸೂಕ್ಷ್ಮ ವಲಯಗಳಿಗೆ ಉಪಕರಣ ತಯಾರಿಸಿ ಒದಗಿಸುತ್ತಿದೆ. ಈ ಸಂಸ್ಥೆಯನ್ನು ಮುಂದಿನ ದಿನಗಳಲ್ಲಿ ದೊಡ್ಡ ಪ್ರಮಾಣದಲ್ಲಿ ವಿಸ್ತರಿಸುವ ಉದ್ದೇಶವಿದೆ ಎಂದು ಸಚಿವ ಹೆಚ್.ಡಿ.ಕುಮಾರಸ್ವಾಮಿ ಈ ಸಂದರ್ಭದಲ್ಲಿ ತಿಳಿಸಿದರು. ಇದೇ ಸಂದರ್ಭದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಸಿಎಂಟಿಐ ನಲ್ಲಿರುವ ಸುಧಾರಿತ ಎಂಜಿನಿಯರಿಂಗ್ ಸಾಮಗ್ರಿ ಪರೀಕ್ಷಾ ಸೌಲಭ್ಯ ಕೇಂದ್ರವನ್ನು ರಾಷ್ಟ್ರಕ್ಕೆ ಸಮರ್ಪಿಸಿದರು.

<><*<><>*><>

ರಾಜ್ಯದ ಎರಡು ಮತ್ತು ಮೂರನೇ ಶ್ರೇಣಿಯ ನಗರ ಪಟ್ಟಣಗಳ ೫೦ ಸರ್ಕಾರಿ ಕಾಲೇಜುಗಳಲ್ಲಿ ಅತ್ಯಾಧುನಿಕ ಕೃತಕಬುದ್ಧಿಮತ್ತೆ ಪ್ರಯೋಗಾಲಯ ಸ್ಥಾಪಿಸಲು ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಒಟ್ಟು ೧೦ ಕೋಟಿ ರೂಪಾಯಿ ವೆಚ್ಚದಲ್ಲಿ ಕೃತಕ ಬುದ್ಧಿಮತ್ತೆ ಮತ್ತು ಪ್ರಯೋಗಾಲಯಗಳನ್ನು ಸ್ಥಾಪಿಸಲಾಗುವುದು. ಕೇಂದ್ರ ಸರ್ಕಾರವು ಎಐ ಮಿಷನ್ ಯೋಜನೆಯಡಿ ಪ್ರತಿಯೊಂದು ಪ್ರಯೋಗಾಲಯಕ್ಕೆ ಮೂರು ವರ್ಷಗಳ ಅವಧಿಗೆ ಸುಮಾರು ೬೯ ಲಕ್ಷ ಮೊತ್ತದ ನೆರವು ನೀಡಲಿದೆ ಎಂದು ಅವರು ಈ ಸಂದರ್ಭದಲ್ಲಿ ಹೇಳಿದ್ದಾರೆ.

<><*<><>*><>

ಬೆಂಗಳೂರಿನಲ್ಲಿರುವ ಹ್ಯೂಮನ್ ಜೆನೆಟಿಕ್ಸ್ ಕೇಂದ್ರದಲ್ಲಿ ಹೊಸ ಮೂಲ ಸೌಕರ್ಯ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.  ಒಟ್ಟು ೬ ಕೋಟಿ ೮೦ ಲಕ್ಷ ರೂಪಾಯಿ ಹೂಡಿಕೆ ಮೂಲಕ ಹೊಸದಾಗಿ ನಿರ್ಮಿಸಲಾದ ಆಧುನಿಕ ಜಿನೊಮೆ ಎಡಿಟಿಂಗ್ ಮತ್ತು ಜೀನ್ ಥೆರಪಿ ಸಂಸ್ಥೆ ಸೇರಿದಂತೆ ಇತರ ಜೈವಿಕ ತಂತ್ರಜ್ಞಾನ ಪ್ರಯೋಗಾಲಯಗಳಲ್ಲಿ ಅತ್ಯಾಧುನಿಕ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><*<><>*><>

ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಇಂದು ಕೊಲ್ಲೂರಿಗೆ ಭೇಟಿ ನೀಡಿ, ಶ್ರೀ ಮೂಕಾಂಬಿಕಾ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಇದಕ್ಕೂ ಮುನ್ನ ವಿಶೇಷ ವಿಮಾನದ ಮೂಲಕ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರನ್ನು ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಹೂಗುಚ್ಛ ನೀಡುವ ಮೂಲಕ ಸ್ವಾಗತಿಸಿದರು.

<><*<><>*><>

ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಇಂದು ಕೊಲ್ಲೂರಿಗೆ ಭೇಟಿ ನೀಡಿ, ಶ್ರೀ ಮೂಕಾಂಬಿಕಾ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಬಿಗಿ ಭದ್ರತೆಯ ನಡುವೆ ಮಂಗಳೂರಿನಿಂದ ರಸ್ತೆ ಮೂಲಕ ಕೊಲ್ಲೂರಿಗೆ ಆಗಮಿಸಿದ ವಿಜಯ್ ಅವರಿಗೆ ದೇವಾಲಯದ ವತಿಯಿಂದ ಪೂರ್ಣ ಕುಂಭ ಕಲಶದೊಂದಿಗೆ ಸ್ವಾಗತ ಕೋರಲಾಯಿತು. ದೇವಸ್ಥಾನದ ವ್ಯವಸ್ಥಾಪನಾ ಸಮಿತಿಯ ಅಧ್ಯಕ್ಷ ಬಾಬು ಹೆಗ್ಡೆ ಹಾಗೂ ಸದಸ್ಯರು ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡರು. ಬಳಿಕ ರಾಮಚಂದ್ರ ಅಡಿಗ ಅವರ ನೇತೃತ್ವದಲ್ಲಿ ವಿಶೇಷ ಪೂಜೆಯ ಸಂಕಲ್ಪ ನೆರವೇರಿಸಲಾಯಿತು. ಸುಮಾರು ೨೦ ನಿಮಿಷಗಳ ಕಾಲ ತಂಗಿದ್ದ ಅವರು ಶ್ರೀ ಮೂಕಾಂಬಿಕಾ ದೇವಿಗೆ ಪೂಜೆ ಸಲ್ಲಿಸಿ ವಿಜಯದ ಸಂಕೇತವಾಗಿ ಬೆಳ್ಳಿಯ ಖಡ್ಗವನ್ನು ಸಮರ್ಪಿಸಿದರು. ಇದಕ್ಕೂ ಮುನ್ನ ವಿಶೇಷ ವಿಮಾನದ ಮೂಲಕ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರನ್ನು ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಹೂಗುಚ್ಛ ನೀಡುವ ಮೂಲಕ ಸ್ವಾಗತಿಸಿದರು.

<><*<><>*><>

ಕೇಂದ್ರ ಸಂಸ್ಕೃತಿ ಸಚಿವಾಲಯದ, ಸಂಗೀತ ನಾಟಕ ಅಕಾದೆಮಿ, ೨೦೨೪ ಹಾಗೂ ೨೦೨೫ ನೇ ಸಾಲಿನ ಪುರಸ್ಕಾರಗಳನ್ನು ಪ್ರಕಟಿಸಿದ್ದು, ರಾಜ್ಯದ ಏಳು ಕಲಾವಿದರು ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪ್ರಶಸ್ತಿಗೆ ಪಾತ್ರರಾದ ಹಿರಿಯ ಚಿತ್ರ ನಿರ್ದೇಶಕ ಟಿ.ಎಸ್ ನಾಗಾಭರಣ ಈ ಗೌರವದ ಬಗ್ಗೆ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ : ಟಿ.ಎಸ್.ನಾಗಾಭರಣ

ಹಿರಿಯ ಮೃದಂಗ ಕಲಾವಿದ ಎ.ವಿ ಆನಂದ ಸೇರಿದಂತೆ, ಏಳು ಜನರಿಗೆ ಅಕಾಡೆಮಿ ರತ್ನ ಪ್ರಶಸ್ತಿ ಸಂದಿದೆ. ಖ್ಯಾತ ಯಕ್ಷಗಾನ ಕಲಾವಿದ, ಸಂಘಟಕ ಗುಣವಂತೆಯ ಶಿವಾನಂದ ಹೆಗಡೆ ಕೆರೆಮನೆ

ಹಾಗೂ ಬಿಸಿಲುಕೊಪ್ಪದ ಪ್ರಸಿದ್ಧ ರುದ್ರ ವೀಣಾ ವಾದಕಿ ವಿದುಷಿ ಜ್ಯೋತಿ ಹೆಗಡೆ ಪ್ರತಿಷ್ಠಿತ ಕೇಂದ್ರ ‘ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ’ ಗೌರವಕ್ಕೆ ಪಾತ್ರರಾಗಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಶ್ಲಾಘಿಸಿದ್ದಾರೆ. ರಾಷ್ಟ್ರಮಟ್ಟದಲ್ಲಿ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ ಇಬ್ಬರೂ ಮಹಾನ್ ಸಾಧಕರ ಕಲಾ ಯಾನ ಹೀಗೆಯೇ ಯಶಸ್ವಿಯಾಗಿ ಮುಂದುವರಿಯಲಿ ಎಂದು ಹಾರೈಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>